ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ಆರ್ಥಿಕ ಮಿತವ್ಯಯ ಸಡಿಲಿಕೆ ಕುರಿತು

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-

58 (168) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅನುದಾನಿತ ಪ್ರಾಥಮಿಕ, ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಹಾಗೂ ಪದವಿ ಕಾಲೇಜುಗಳಲ್ಲಿ ಖಾಲಿ ಹುದ್ದೆ ಭರ್ತಿ ಮಾಡುವ ಕುರಿತಂತೆ ಆರ್ಥಿಕ ಇಲಾಖೆಯ ಆರ್ಥಿಕ ಮಿತವ್ಯಯದ ಆದೇಶ ಹೊರಡಿಸಿ ಹುದ್ದೆ ಭರ್ತಿ ಮಾಡುವುದನ್ನು ತಡೆಹಿಡಿಯಲಾಗಿದೆಯೇ; ಯಾವಾಗ ತಡೆಹಿಡಿಯಲಾಗಿದೆ ; (ಆದೇಶÀವನ್ನು ಒದಗಿಸುವುದು)

(ಆ) ಈಗಾಗಲೇ ಆರ್ಥಿಕ ಇಲಾಖೆಯ ಅನುಮತಿ ನೀಡಿರುವ ಹುದ್ದೆಗಳಿಗೆ ಅನುದಾನ ಒದಗಿಸಲು ಇರುವ ತೊಂದರೆ ಏನು;

(ಇ) ಈ ಆದೇಶದಿಂದ ಅನುದಾನಿತ ವ್ಯವಸ್ಥೆಯ ಈ ಎಲ್ಲ ನೌಕರರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಈ ಆರ್ಥಿಕ ಮಿತವ್ಯಯದ ಆದೇಶವನ್ನು ಹಿಂಪಡೆಯುವಂತೆ ಮುಖ್ಯಮಂತ್ರಿಗಳಿಗೆ ಶಾಸಕರ ಒತ್ತಡಗಳು ಬಂದಿದೆಯೇ; ಪ್ರತಿಯೊಂದು ಪತ್ರದ ವಿವರ ಹಾಗೂ ಪ್ರಸ್ತಾವನೆಗಳ ವಿವರವನ್ನು ಒದಗಿಸುವುದು; ಮುಖ್ಯಮಂತ್ರಿಗಳ ಷರಾ ಸಹಿತ ಕಡತವು ಯಾವ ಹಂತದಲ್ಲಿದೆ ;

(ಉ) ಈಗಾಗಲೇ ಆರ್ಥಿಕ ಇಲಾಖೆಯು ಅನುಮತಿ ನೀಡಿ ಹುದ್ದೆ ಭರ್ತಿ ಮಾಡಲು ಸಹ ಅನುಮತಿ ನೀಡಿರುವ ಕಡತಗಳಿಗೆ ವೇತನ ಒದಗಿಸಲು ಸರ್ಕಾರ ಮುಂದಾಗುವುದೇ ; ಆರ್ಥಿಕ ಮಿತವ್ಯಯದ ಆದೇಶವನ್ನು ಯಾವಾಗ ಹಿಂಪಡೆಯಲಾಗುವುದು?